# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಪ್ರಭಾರ ಭತ್ಯೆ ದರಗಳ ಪರಿಷ್ಕರಣೆಯ ಕುರಿತು.

---

**ಓದಲಾಗಿದೆ:** ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 03 ಎಸ್‌ಆರ್‌ಎಸ್ 2012, ದಿನಾಂಕ:14/06/2012

**ಪ್ರಸ್ತಾವನೆ:**

ಮೇಲೆ ಓದಲಾದ ಸರ್ಕಾರಿ ಆದೇಶದಲ್ಲಿ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 32 ಮತ್ತು 68 ರಡಿಯಲ್ಲಿ ಸರ್ಕಾರಿ ನೌಕರರನ್ನು ಸ್ವತಂತ್ರ ಪ್ರಭಾರದಲ್ಲಾಗಲೀ ಅಥವಾ ತಮ್ಮ ಹುದ್ದೆಯ ಕರ್ತವ್ಯದ ಜೊತೆ ಬೇರೊಂದು ಹುದ್ದೆಯ ಹೆಚ್ಚಿನ ಪ್ರಭಾರದಲ್ಲಿರಿಸಿದಾಗ ಆ ಹುದ್ದೆಯ ವೇತನಶ್ರೇಣಿಯ ಕನಿಷ್ಟ ಹಂತದ ಶೇಕಡಾ.7.5 ದರ ಪ್ರಭಾರ ಭತ್ಯೆಯನ್ನಾಗಿ ನೀಡುವಲ್ಲಿ ದಿನಾಂಕ:01/04/2012ರಿಂದ ಜಾರಿಗೊಳಿಸಿ ಅವಕಾಶ ಕಲ್ಪಿಸಲಾಗಿದೆ.

ಪ್ರಸ್ತುತ ರಾಜ್ಯದಲ್ಲಿ ಸರ್ಕಾರಿ ನೌಕರರು /ಅಧಿಕಾರಿಗಳ ಕೊರತೆಯಿಂದಾಗಿ ಹಲವಾರು ಅಧಿಕಾರಿಗಳು ಒಂದಕ್ಕಿಂತ ಹೆಚ್ಚಿನ ಹುದ್ದೆಗಳಲ್ಲಿ ಅಧಿಕ ಪ್ರಭಾರ/ಸಮವರ್ತಿತ ಪ್ರಭಾರದಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಈ ರೀತಿ ಹೆಚ್ಚಿನ ಕಾರ್ಯಭಾರದ ಒತ್ತಡದಲ್ಲಿ ಕಾರ್ಯ ನಿರ್ವಹಿಸುತ್ತಿರುವವರಿಗೆ ಪ್ರಸ್ತುತ ನೀಡುತ್ತಿರುವ ಶೇಕಡಾ 7.5 ದರ ಪ್ರಭಾರ ಭತ್ಯೆಯು ಕಡಿಮೆ ಎಂದು ಅಧಿಕಾರಿಗಳಿಂದ ಅಭಿಪ್ರಾಯಗಳು ಕೇಳಿ ಬಂದಿರುತ್ತದೆ. ಇದಲ್ಲದೇ ಈ ಆದೇಶವು 07 ವರ್ಷಗಳಷ್ಟು ಹಿಂದಿನ ಅವಧಿಯಲ್ಲಿ ಪರಿಷ್ಕರಿಸಲ್ಪಟ್ಟಿರುವುದಾಗಿದೆ. ಈ ಹಿನ್ನೆಲೆಯಲ್ಲಿ ಪ್ರಭಾರ ಭತ್ಯೆಯ ದರವನ್ನು ಪರಿಷ್ಕರಿಸುವ ಬಗ್ಗೆ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 08 ಎಸ್‌ಆರ್‌ಎಸ್ 2018 ಬೆಂಗಳೂರು, ದಿನಾಂಕ: 30/04/2019**

ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 32 ಮತ್ತು 68 ರಡಿಯಲ್ಲಿ ಸರ್ಕಾರಿ ನೌಕರರನ್ನು ಸ್ವತಂತ್ರ ಪ್ರಭಾರದಲ್ಲಾಗಲೀ ಅಥವಾ ತಮ್ಮ ಹುದ್ದೆಯ ಕರ್ತವ್ಯದ ಜೊತೆ ಬೇರೊಂದು ಹುದ್ದೆಯ ಹೆಚ್ಚಿನ ಪ್ರಭಾರದಲ್ಲಿರಿಸಿದಾಗ ಆ ಹುದ್ದೆಯ ವೇತನ ಶ್ರೇಣಿಯ ಕನಿಷ್ಟ ಹಂತದಲ್ಲಿ ಮೊದಲ ಮೂರು ತಿಂಗಳವರೆಗೆ ಶೇಕಡಾ 7.5 ದರದಲ್ಲಿ, ಆ ನಂತರದ ಮೂರು ತಿಂಗಳಿಗಿಂತ ಹೆಚ್ಚಿನ ಅವಧಿಗೆ ಶೇಕಡಾ 15 ದರದಲ್ಲಿ ಪ್ರಭಾರ ಭತ್ಯೆಯನ್ನು ನಿಗಧಿಪಡಿಸಿ ಆದೇಶಿಸಿದೆ.

ಸದರಿ ಪ್ರಭಾರ ವ್ಯವಸ್ಥೆಯು ಪ್ರಭಾರ ಹೊಂದಿರುವ ಒಂದು ಹುದ್ದೆಗೆ ಮಾತ್ರ ಅನ್ವಯಿಸತಕ್ಕದ್ದು ಮತ್ತು ಸದರಿ ದರಗಳು ಈ ಆದೇಶವನ್ನು ಹೊರಡಿಸಿದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

ಕರ್ನಾಟಕ ನಾಗರೀಕ ಸೇವಾ ನಿಯಮಗಳಿಗೆ ಅವಶ್ಯಕ ತಿದ್ದುಪಡಿಯನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Suvarna B.S

**(ಬಿ.ಎಸ್.ಸುವರ್ಣ)**
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-1)

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 100 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು ಕೋರಿ ಕಳುಹಿಸಿದೆ.

ಪ್ರತಿ:

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು/ಅಪರಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.
4. ಎಲ್ಲಾ ಜಿಲ್ಲಾಧಿಕಾರಿಗಳು.
5. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗ.
6. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
7. ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್.ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001
8. ಮಹಾಲೇಖಪಾಲರು(ಇ & ಆರ್‌ಎಸ್‌ಎ). ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್.ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001
9. ಮಹಾಲೇಖಪಾಲರು (ಎ & ಇ), ಕರ್ನಾಟಕ, ಪೋಸ್ಟ್.ಬಾಕ್ಸ್ ಸಂಖ್ಯೆ-5329/5369, ಪಾರ್ಕ ಹೌಸ್ ರೋಡ್, ಬೆಂಗಳೂರು.
10. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚನ್ಯಾಯಾಲಯ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
14. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
15. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ವಿಧಾನ ಪರಿಷತ್ತು, ಬೆಂಗಳೂರು.
16. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
17. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು.
18. ಪ್ರಾಜೆಕ್ಟ್‌ಆಫೀಸರ್, ಹೆಚ್.ಆರ್.ಎಂ.ಎಸ್, ಕೊಠಡಿ ಸಂಖ್ಯೆ:145-ಎ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
19. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
20. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
21. ಕರ್ನಾಟಕ ಸರ್ಕಾರಿ ಸಚಿವಾಲಯದ ಗ್ರಂಥಾಲಯ; ವಿಧಾನ ಮಂಡಲದ ಗ್ರಂಥಾಲಯ.
22. ವಾರಪತ್ರ/ಶಾಖೆಯ ರಕ್ಷಾ ಕಡತ.

[ಕ್ರಮ ಸಂಖ್ಯೆ:6 ರಿಂದ 18 ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ].

ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ WWW.finance.kar.nic.in. ವೀಕ್ಷಿಸಿ.